Bruhat Bengaluru
Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬಿಬಿಎಂಪಿ/ವಾ.22/ಜೆ.ಸಿ ಉ/ಪಿಆರ್/30/2020-21

ಸಹಾಯಕ ಅಭಿಯಂತರರ ಕಛೇರಿ
ಜೆ.ಸಿ ನಗರ ಉಪ-ವಿಭಾಗ, ಪೂರ್ವ ವಿಭಾಗ
ವಿ. ನಾಗೇನಹಳ್ಳಿ, ವಾರ್ಡ್ ನಂ:22
ಬೆಂಗಳೂರು-560032
ದಿನಾಂಕ:05-06-2021.

## ದಿನಾಂಕ: 05-06-2021 ರಂದು ವಾರ್ಡ್ ಸಮಿತಿಯ ಸಭೆಯ ನಡವಳಿಗಳು:-

ಸಭೆಗೆ ಹಾಜರಿದ್ದವರು:

- ಶ್ರೀ. ರಾಮಕೃಷ್ಣರೆಡ್ಡಿ, ಕಾರ್ಯಪಾಲಕ ಅಭಿಯಂತರರು, ನೋಡೆಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ. ಗುರುಸಿದ್ದಪ್ಪ .ಜಿ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀ. ಎನ್. ಬಿ ಗಂಗಾಧರ್, ಸಹಾಯಕ ಅಭಿಯಂತರರು, ಬೆಸ್ಕಾಂ
- ಶ್ರೀಮತಿ ಉಷಾರಾಣಿ, ಹಿರಿಯ ಆರೋಗ್ಯ ಪರೀವೀಕ್ಷಕರು, ಘನತ್ಯಾಜ್ಯ

ವಾರ್ಡ್ ಸಮತಿ ಸಭೆಯನ್ನು ವಾರ್ಡ್ ಸಮಿತಿ ಕಾರ್ಯದರ್ಶಿಗಳಾದ ಶ್ರೀ. ಗುರುಸಿದ್ದಪ್ಪ .ಜಿ ರವರು ವಾರ್ಡ್ ಸಮಿತಿ ಅಧ್ಯಕ್ಷರು, ಸಮಿತಿಯ ಸದಸ್ಯಗಳು ಹಾಗೂ ವಾರ್ಡ್ ಸಂಖ್ಯೆ: 22ರ ನಾಗರೀಕರು ಹಾಗೂ ಎಲ್ಲಾ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಸಭೆಯನ್ನು ಪ್ರಾರಂಭಿಸಿದರು.

ಶ್ರೀ. ರಾಮಕೃಷ್ಣರೆಡ್ಡಿ, ನೋಡೆಲ್ ಅಧಿಕಾರಿಗಳು ಸಭೆಗೆ ಹಾಜರಿದ್ದ ಅಧಿಕಾರಿಗಳ ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು, ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು. ಹಾಗೂ ಕಮಿಟಿ ಕಾರ್ಯದರ್ಶಿಗಳು ಮಾತನಾಡುತ್ತಾ ದಿನಾಂಕ; 15-05-2021 ರಂದು ನಡೆದ ವಾರ್ಡ್ ಸಮಿತಿಯ ನಡವಳಿಗಳನ್ನು

ಪುನರಾವಲೋಕನ ಮಾಡಲಾಯಿತು. ಹಿಂದಿನ ಸಭೆಯಲ್ಲಿ ತೆಗೆದುಕೊಂಡಿದ್ದ ತೀರ್ಮಾನಗಳನ್ನು ಕುರಿತು ಈ ದಿನಾಂಕದವರೆಗೆ ನಿರ್ವಹಿಸಿದ ಕೆಲಸಗಳ ಬಗ್ಗೆ ಸದಸ್ಯರುಗಳಿಗೆ ತಿಳಿಸಲಾಯಿತು.

- ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ, ವಾರ್ಡಿನಲ್ಲಿರುವ ಎಲ್ಲಾ ತಗ್ಗು ಪ್ರದೇಶಗಳಲ್ಲಿ ಮಳೆ ನೀರಿನಿಂದ ಉಂಟಾಗಿರುವ ಸಮಸ್ಯೆಗಳನ್ನು ತಡೆಗಟ್ಟುವ ಬಗ್ಗೆ ಚರ್ಚಿಸಲಾಯಿತ್ತು.
- ವಾರ್ಡಿನಲ್ಲಿ ಕೋವಿಡ್ ವ್ಯಾಕ್ಸಿನೇಶನ್ ಗಳ ಬಗ್ಗೆ ಜನರಿಗೆ ಹೆಚ್ಚಿನ ಮಟ್ಟದಲ್ಲಿ ಜಾಗೃತಿ ಮೂಡಿಸುತ್ತಿದ್ದು, ಹಾಗೂ ಈಗಾಗಲೇ ವಾರ್ಡ್ ಮಟ್ಟದಲ್ಲಿ 65% ನಷ್ಟು ಕೋವಿಡ್ ವ್ಯಾಕ್ಸಿನೇಶನ್ ಗಳನ್ನು ಹಾಕಲಾಗಿದೆ ಎಂದು ತಿಳಿಸಿದರು
- ಶ್ರೀಮತಿ. ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 +ve ಕೇಸ್ ಗಳು ಹೆಚ್ಚಾಗುತ್ತಿರುವುದರಿಂದ ವಾರ್ಡ್ ನಲ್ಲಿ ಹೆಚ್ಚುವರಿ ಬೇಡ್ ಗಳ ವ್ಯವಸ್ಥೆ ಮಾಡುವ ಬಗ್ಗೆ ಹಾಗೂ ಸಿ.ಸಿ.ಸಿ (ಕೋವಿಡ್ ಕೇರ್ ಸೆಂಟರ್) ಮತ್ತು ವ್ಯಾಕ್ಸಿನೇಶನ್ ಗಳ ಬಗ್ಗೆ ನೋಡೆಲ್ ಅಧಿಕಾರಿಗಳೊಂದಿಗೆ ಚರ್ಚಿಸಲಾಯಿತ್ತು. ಹಾಗೂ ಅಕ್ಟೋಬರ್ ತಿಂಗಳವರೆಗೆ 45 ವರ್ಷ ಮೇಲ್ಪಟ್ಟ ಜನರಿಗೆ ಮೊದಲ ಹಾಗೂ ಎರಡನೇ ಡೋಸ್ ವ್ಯಾಕ್ಸಿನೇಶನ್ ಗಳನ್ನು ಕೋಡುವುದಾಗಿ ತಿಳಿಸಿದರು. ಹಾಗೂ ಆರೋಗ್ಯ ಇಲಾಖೆಯಲ್ಲಿರುವ ಅನುಕೂಲತೆಗಳು ತಿಳಿಸಿದರು.
- ಪ್ರತಿದಿನ ಜನಸಾಮಾನ್ಯರಿಗೆ ಅನುಕೂಲವಾಗುವಂತೆ ಕೋವಿಡ್ Test ಮಾಡಿಸುವ ಸ್ಥಳ ತೋರಿಸುವುದು ಹಾಗೂ ಯಾವುದೇ ತರಹ ದೂರಗಳು ಬಂದರೆ ಹಾಜರಾಗುವುದನ್ನು ತಿಳಿಸಿದರು. ಮಾಡಿಸುವ ಸ್ಥಳ
- ವಾರ್ಡಿನಲ್ಲಿ ಈಗಾಗಲೇ ಕೋವಿಡ್ ವ್ಯಾಕ್ಸಿನೇಶನ್ 2ನೇ ಡೋಸ್ ಗಳನ್ನು 45 ವರ್ಷ ಮೇಲ್ಪಟ್ಟವರಿಗೆ ಹಾಗೂ 18 ಮೇಲ್ಪಟ್ಟವರಿಗೂ ಕೂಡ ಕೋವಿಡ್ ವ್ಯಾಕ್ಸಿನೇಶನ್ ಗಳನ್ನು ಪ್ರತಿದಿನ ಹಾಕಲಾಗುತ್ತಿರುವ ಬಗ್ಗೆ ಮಾಹಿತಿ ನೀಡಿದರು.
- ವಾರ್ಡ್ ವ್ಯಾಪ್ತಿಯ ಮುಖ್ಯ ಹಾಗೂ ಅಡ್ಡರಸ್ತೆಗಳಲ್ಲಿ ಘನತ್ಯಾಜ್ಯ ಇಲಾಖೆಯವರಿಂದ ಕಸ ವಿಲೇವಾರಿ ಮಾಡುವ ಬಗ್ಗೆ ಚರ್ಚಿಸಲಾಯಿತ್ತು.
- ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ, ಖಾತಾ ವರ್ಗಾವಣೆ, ಖಾತಾ ನೋಂದಣಿ, ತೆರಿಗೆ ಹಣ ಪಾವತಿ, ಹೊಸದಾಗಿ ಚುನಾವಣೆ ಗುರುತೀನ ಚೀಟಿ ಮಾಡುವ ಬಗ್ಗೆ ಹಾಗೂ ಇನ್ನಿತರ ಕಂದಾಯ ಪಾವತಿಗಳ ಬಗ್ಗೆ ಸಭೆಗೆ ಹಾಜರಿದ್ದ ಕಂದಾಯ ಇಲಾಖೆಯರೊಂದಿಗೆ ಹೆಚ್ಚಿನ ಕಾರ್ಯವಿಧಾನಗಳ ಬಗ್ಗೆ ಚರ್ಚಿಸಲಾಯಿತ್ತು.
- ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ, ಸನ್ ರೈಸ್ ಕಾಲೋನಿಯಲ್ಲಿ ಅಡ್ಡಮೋರಿಗೆ ಸಂಬಂಧಿಸಿದ ಉಳಿದ ಎಲ್ಲಾ ಕಾಮಗಾರಿಯನ್ನು ಶೀಘ್ರವಾಗಿ ಮುಗಿಸುವಂತೆ ಶ್ರೀ ಪ್ರಸನ್ನ ಕುಮಾರ್ (ಗುತ್ತಿಗೆ ದಾರರು) ರವರಿಗೆ ತಿಳಿಸಿದರು.

- ಸಭೆಯಲ್ಲಿ ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ, ರಸ್ತೆಗಳಲ್ಲಿ ಅಲ್ಲಲ್ಲಿ ಗುಂಡಿಗಳನ್ನು ಬಿದ್ದಿರುವುದರಿಂದ ತಮ್ಮ ಮೇಲಾಧಿಕಾರಿಗಳಿಂದ ಅನುಮತಿ ಪಡೆದು ಗುಂಡಿಗಳನ್ನು ತುಂಬಲು ಸಭೆಗೆ ಹಾಜರಿದ್ದ ಸಹಾಯಕ ಅಭಿಯಂತರರಿಗೆ ಶೀಘ್ರವಾಗಿ ಗುಂಡಿಗಳನ್ನು ಮುಚ್ಚುವ ಬಗ್ಗೆ ಕ್ರಮಗೈಗೊಳ್ಳುವ ಬಗ್ಗೆ ತಿಳಿಸಿದರು.
- ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ, Bescom ಇಲಾಖೆ, BWSSB ಇಲಾಖೆ ಮತ್ತು Traffic ಪೋಲೀಸ್ ಇಲಾಖೆಯವರು ಮುಂದಿನ ಸಭೆಯಲ್ಲಿ ತಪ್ಪದೇ ವಾರ್ಡ್ ಸಮಿತಿ ಸಭೆಗೆ ಹಾಜರಾಗಲು ನೋಟೀಸ್ ಅನ್ನು ನೀಡುವಂತೆ ತಿಳಿಸಿದರು.
- ವಾರ್ಡಿನಲ್ಲಿ ಕೋವಿಡ್-19 +ve ಕೇಸ್ ಗಳು ಹೆಚ್ಚಾಗಿರುವುದರಿಂಧ ಅದಕ್ಕೆ ಬೇಕಾದ ಕ್ರಮಗಳನ್ನು ಕೈಗೊಳ್ಳುತ್ತಿರುವ ಬಗ್ಗೆ ಚರ್ಚಿಸಲಾಯಿತ್ತು.
- ವಾರ್ಡ್ ನ ವ್ಯಾಪ್ತಿಯಲ್ಲಿ ಬರುವ ಕೆಲವು ಅಡ್ಡರಸ್ತೆ ಹಾಗೂ ಮುಖ್ಯರಸ್ತೆಗಳಲ್ಲಿ ಸಿ.ಸಿ.ಟಿ.ವಿ ಕ್ಯಾಮೆರಾಗಳನ್ನು ಅಳವಡಿಸುವ ಕಾಮಗಾರಿಯು ಪ್ರಗತಿಯಲ್ಲಿರುವ ಬಗ್ಗೆ ತಿಳಿಸಿದರು.
- ವಾರ್ಡ್ ನ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸ್ಮಶಾನಗಳ ಬಗ್ಗೆ ನೋಡೆಲ್ ಅಧಿಕಾರಿಗಳ ಜೊತೆ ಚರ್ಚಿಸಲಾಯಿತ್ತು. ಹಾಗೂ ವಾರ್ಡಿನಲ್ಲಿ ಕೋವಿಡ್-19 +ve ನಿಂದ ಮೃತಪಟ್ಟವರನ್ನು ಪಿ.ಪಿ.ಟಿ ಕೀಟ್ ಗಳನ್ನು ಧರಿಸಿ ಸುರಕ್ಷಿತವಾಗಿ ಶವಸಂಸ್ಕಾರವನ್ನು ನೆರವೇರಿಸಲಾಗುತ್ತಿದೆ ಎಂದು ತಿಳಿಸಿದರು.
- ಆರೋಗ್ಯ ಇಲಾಖೆ ಕಡೆಯಿಂದ ವಾರ್ಡಿನಲ್ಲಿರುವ ಹೋಟೆಲ್ ಗಳಲ್ಲಿ ಕೆಲಸ ಮಾಡುವ ಜನರಿಗೆ ವ್ಯಾಷಿನೇಶನ್ ಗಳನ್ನು ಪೂರೈಕೆ ಮಾಡುತ್ತಿರುವ ಬಗ್ಗೆ ತಿಳಿಸಿದರು ಹಾಗೂ ವಾರ್ಡಿನಲ್ಲಿ ಕಸ ನಿರ್ವಹಣೆ ಸರಿಯಾಗಿ ಆಗುತ್ತಿದ್ದು ಯಾವುದೇ ಸಮಸ್ಯೆ ಇರುವುದಿಲ್ಲ ಎಂದು ತಿಳಿಸಿದರು.
- ವಾರ್ಡಿನಲ್ಲಿ ಕಾರ್ಯನಿರ್ವಹಿಸುವ ಪಿ.ಕೆಗಳಿಗೆ ಕಡ್ಡಾಯವಾಗಿ ವ್ಯಾಷಿನೇಶನ್ ಹಾಕಿಸಿಕೊಳ್ಳಬೇಕಾಗಿರುತ್ತದೆ. ಕೋವಿಡ್ ವ್ಯಾಷಿನೇಶನ್ ಗಳನ್ನು ಹಾಕಿಸಿಕೊಳ್ಳದೇ ಇರುವವಂತಹ ಪಿ.ಕೆ ಗಳಿಗೆ ಹಾಗೂ ಸರ್ಕಾರದಿಂದ ಯಾವುದೇ ತರಹ ಸೌಲಭ್ಯಗಳು ದೊರೆಯುವುದಿಲ್ಲದೆಂದು ತಿಳಿಸಿದರು.
- ವಾರ್ಡ್ ನ ವ್ಯಾಪ್ತಿಯಲ್ಲಿ ಬರುವ ಎಲ್ಲ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಿಗೆ ಕಡ್ಡಾಯವಾಗಿ ಸ್ಯಾನಿಟೈಸರ್ ಮಾಡಲಾಗುತ್ತಿದೆ ಎಂದು ಸಭೆಗೆ ಹಾಜರಾಗಿದ್ದ ಶ್ರೀಮತಿ ಉಷಾರಾಣಿ, ಹಿರಿಯ ಆರೋಗ್ಯ ಪರೀವೀಕ್ಷರು ತಿಳಿಸಿದರು.

ಅಂತಿಮವಾಗಿ ಮೇಲ್ಕಂಡ ಎಲ್ಲಾ ವಿಷಯವನ್ನು ಚರ್ಚಿಸಲಾಗಿ ಹಾಗೂ ಚರ್ಚಿಸಿದ ವಿಷಯಗಳು ಬಗ್ಗೆ ಅಧಿಕಾರಿಗಳು ಮುಂದಿನ ವಾರ್ಡ್ ಸಮತಿ ಸಭೆಗೆ ಸಂಬಂಧಿಸಿದ ಅಧಿಕಾರಿಗಳು ಕೈಗೊಂಡ ಕ್ರಮದ ಬಗ್ಗೆ ವರದಿ ಪೂರ್ಣಗೊಂಡ ಭಾವಚಿತ್ರ ಹಾಗೂ ಲಿಖಿತ ವರದಿ ತಯಾರಿಸಿಕೊಂಡು ಹಾಜರಾಗಲು ಸೂಚಿಸಿ ಹಾಗೂ ಹಾಜರಾಗದೆ ಇರುವ ಅಧಿಕಾರಿಗಳು ಮುಂದಿನ ಸಭೆಯಲ್ಲಿ ಹಾಜರಾಗಿರಬೇಕೆಂದು ಸೂಚಿಸಿದರು. ಸಭೆಯನ್ನು ಅಧ್ಯಕ್ಷರ ಅಪ್ಪಣೆ ಮೇರೆಗೆ ವಾರ್ಡ್ ಸಮತಿ ಕಾರ್ಯದರ್ಶಿಗಳಾದ ಗುರುಸಿದ್ದಪ್ಪ .ಜಿ ರವರ ವಂದನಾರ್ಪಣೆಯೊಂದಿಗೆ ಮಧ್ಯಾಹ್ನ 12:45ಕ್ಕೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಶ್ರೀ. ರಾಮಕೃಷ್ಣರೆಡ್ಡಿ)
**ನೋಡೆಲ್ ಅಧಿಕಾರಿಗಳು**
**ಹಾಗೂ**
**ವಾರ್ಡ್ ಸಮಿತಿ ಅಧ್ಯಕ್ಷರು**

(ಗುರುಸಿದ್ದಪ್ಪ .ಜಿ)
**ವಾರ್ಡ್ ಸಮಿತಿ ಕಾರ್ಯದರ್ಶಿ**
**ಹಾಗೂ**
**ಸಹಾಯಕ ಅಭಿಯಂತರರು ವಾರ್ಡ್ ನಂ:22**